ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

16

ಇಲಾಖೆ / ವಿಷಯ : DEPARTMENT / SUBJECT: ಇತರೆ ರಾಜ್ಯಗಳ ಮಾಹಿತಿ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 11/1/2021

# ಗವರ್ನರ್ ವಿರುದ್ಧವೇ ಮುಖ್ಯಮಂತ್ರಿ ಧರಣಿ!

ಕ.ಪ್ರ 11/1/21

## ಕಿರಣ್ ಬೇಡಿ ಗೋಬ್ಯಾಕ್: ಪುದುಚೇರಿ ಸಿಎಂ

**ಪುದುಚೇರಿ:** ಪುದುಚೇರಿ . ಉಪರಾಜ್ಯಪಾಲೆ ಕಿರಣ್ ಬೇಡಿ ವಜಾಕ್ಕೆ ಆಗ್ರಹಿಸಿ ಪುದುಚೇರಿ ಮುಖ್ಯಮಂತ್ರಿ ವಿ.ನಾರಾಯಣಸಾಮಿ ಬೀದಿಗೆ ಇಳಿದಿದ್ದಾರೆ.

ಬೇಡಿ ಅವರ ವಜಾಕ್ಕೆ ಆಗ್ರಹಿಸಿ ರಾಜ್ಯಪಾಲರ ಅಧಿಕೃತ ನಿವಾಸವಾದ 'ರಾಜನಿವಾಸ'ದ ಎದುರು 3 ದಿನದಿಂದ ಆಡಳಿತಾರೂಢ ಕಾಂಗ್ರೆಸ್ ಹಾಗೂ ಮಿತ್ರಪಕ್ಷಗಳು ಪ್ರತಿಭಟನೆಗೆ ನಡೆಸುತ್ತಿವೆ. ಶನಿವಾರ ರಾತ್ರಿ ಪ್ರತಿಭಟನಾ ಸ್ಥಳದಲ್ಲೇ ಮಲಗಿದ್ದ ನಾರಾಯಣಸಾಮಿ, ಭಾನುವಾರವೂ ಪ್ರತಿಭಟನೆಯಲ್ಲಿ ಭಾಗಿಯಾದರು. 'ಬೇಡಿ.. ಗೋ ಬ್ಯಾಕ್' ಎಂಬ ಫಲಕ ಹಿಡಿದು ಗಮನ ಸೆಳೆದರು. ಇವರಿಗೆ ಸಚಿವ, ಶಾಸಕರೂ ಸಾಥ್ ನೀಡಿದರು. ↘ 8




ಸಿಎಂ ನಾರಾಯಣಸಾಮಿ ಶನಿವಾರ ರಾತ್ರಿ ರಾಜಭವನದ ಎದುರೇ ಮಲಗಿ, ಭಾನುವಾರ ಅಲ್ಲೇ ಪ್ರತಿಭಟನೆ ನಡೆಸಿದರು.

# ಗವರ್ನರ್ ವಿರುದ್ಧವೇ ಸಿಎಂ ಧರಣಿ!

↙ ಮೊದಲ ಪುಟದಿಂದ 11/1/21

ಈ ಕಾರಣದಿಂದ ರಾಜನಿವಾಸಕ್ಕೆ ಕೇಂದ್ರೀಯ ಪಡೆಗಳಿಂದ ಭದ್ರತೆ ಒದಗಿಸಲಾಗಿದೆ.

'ಪುದುಚೇರಿಯ ಅಭಿವೃದ್ಧಿ ಯೋಜನೆಗಳು ಮತ್ತು ಕಾರ್ಯಗಳಿಗೆ ಕಿರಣ್ ಬೇಡಿ ಅಡ್ಡಗಾಲು ಹಾಕುತ್ತಿದ್ದಾರೆ' ಎಂಬುದು ಆಡಳಿತಾರೂಢ ಪಕ್ಷದ ಆರೋಪ. ಆದರೆ, ಬಿಜೆಪಿ ಹಾಗೂ ಅಣ್ಣಾಡಿಎಂಕೆ ಈ ಪ್ರತಿಭಟನೆಯನ್ನು ಖಂಡಿಸಿವೆ. 2016ರಲ್ಲಿ ಕಿರಣ್ ಬೇಡಿ ಅವರು ಲೆಫ್ಟಿನೆಂಟ್ ಗವರ್ನರ್ ಆಗಿ ನೇಮಕವಾದಾಗಿನಿಂದಲೂ ಮುಖ್ಯಮಂತ್ರಿ ಮತ್ತು ರಾಜ್ಯಪಾಲರ ನಡುವೆ ಮನಸ್ತಾಪ, ಜಟಾಪಟಿ ನಡೆದೇ ಇದೆ. ಮೇ ತಿಂಗಳಿನಲ್ಲಿ ವಿಧಾನಸಭಾ ಚುನಾವಣೆ ನಿಗದಿಯಾಗಿರುವಾಗಲೇ ಘಟಾನುಘಟಿ ನಾಯಕರಿಬ್ಬರ ನಡುವಿನ ವೈಮನಸ್ಸು ತಾರಕಕ್ಕೇರಿದೆ.